# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು ಮತ್ತು ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜುಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಏಕರೂಪದ ಊಟತಿಂಡಿ ಒದಗಿಸಲು ಮೆನು ಚಾರ್ಟ್ ನಿಗಧಿಪಡಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಸಕಇ 123 ಸಮನ್ವಯ 2008, ದಿನಾಂಕ: 26-05-20102.

2) ಸರ್ಕಾರದ ಆದೇಶ ಸಂಖ್ಯೆ:ಸಕಇ 79 ಸಮನ್ವಯ 2010, ದಿನಾಂಕ 25.05.2010

3) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪ್ರಸ್ತಾವನೆ ಸಂಖ್ಯೆ:ಕವಶಿಸಸ/ಸಿಆರ್(ಶಿ) 19/2010-11

*************

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯ/ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುವ ಬಗ್ಗೆ ಟೆಂಡರ್ ಕರೆದು ದರಗಳನ್ನು ಮತ್ತು ಗುಣಮಟ್ಟವನ್ನು ನಿರ್ಣಯಿಸಿ ಸರಬರಾಜು ಮಾಡಲು ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಸಮಾಜ ಕಲ್ಯಾಣ ಸಚಿವಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಸತಿ ಶಾಲೆಗಳಿಗೆ ಸಂಬಂಧಿಸಿದಂತೆ ಭೋಜನಾ ವೆಚ್ಚ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ (3)ರಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಪ್ರಸ್ತಾವನೆ ಸಲ್ಲಿಸಿ ಓದಲಾದ (1) ರ ಆದೇಶದ ಅನುಬಂಧ-2 ರಲ್ಲಿ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳು, ದಕ್ಷಿಣ ಕರ್ನಾಟಕ ಜಿಲ್ಲೆಗಳ ಬಯಲು ಸೀಮೆ ಪ್ರದೇಶಗಳು ಮತ್ತು ಉತ್ತರ ಕರ್ನಾಟಕ ಜಿಲ್ಲೆಗಳಿಗೆ ನಿಗಧಿಪಡಿಸಿರುವ ಮೆನುಚಾರ್ಟ್‌ನಲ್ಲಿ ಚಪಾತಿ ಊಟವನ್ನು ನಿಗಧಿಪಡಿಸಿರುವುದಿಲ್ಲ ಪ್ರತಿ ವಿದ್ಯಾರ್ಥಿಗೆ 5 ಕೆ.ಜಿ. ಗೋಧಿ ಸಬ್ಸಿಡಿ ದರದಲ್ಲಿ ಸಿಗುತ್ತಿದ್ದು, ಇತರ ಅಕ್ಕಿ ಮತ್ತು ರಾಗಿಗಿಂತ ಗೋಧಿಯು ಹೆಚ್ಚು ಪೌಷ್ಟಿಕಾಂಶವುಳ್ಳ ಪದಾರ್ಥವಾಗಿರುವುದರಿಂದ ದಿನಕ್ಕೆ ಒಂದು ಬಾರಿ ಅಥವಾ ಎರಡುದಿನಕ್ಕೊಂದು ಬಾರಿಯಾದರೂ ಮಧ್ಯಾಹ್ನ ಅಥವಾ ರಾತ್ರಿ ಊಟಕ್ಕೆ ಚಪಾತಿ ವಸತಿ ಶಾಲೆಗಳ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ನೀಡುವುದು ಅವಶ್ಯವೆಂದು ತಿಳಿಸಿ ಅದಕ್ಕೆ ಬೇಕಾದ ಅಗತ್ಯ ಮಾಹಿತಿಗಳನ್ನು ಒದಗಿಸಿದ್ದಾರೆ. ಪ್ರಸ್ತಾವನೆಯಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಊಟದ ವೆಚ್ಚ ಮಾಹೆಯಾನ ರೂ.650/- ರಿಂದ 750/-ಕ್ಕೆ ಹೆಚ್ಚಿಸಿದ್ದು, ನಿಗಧಿಪಡಿಸಿರುವ ವೆಚ್ಚದಲ್ಲೇ ಉತ್ತಮ ಗುಣಮಟ್ಟದ ಆಹಾರ ಒದಗಿಸಲು ಅನುಬಂಧದಲ್ಲಿ



2017/11

ನೀಡಲಾದ ಮೆನುಚಾರ್ಟ್‌ನಲ್ಲಿ ಆಯಾಯ ಪ್ರದೇಶಕ್ಕೆ ಅನುಸಾರವಾಗಿ ಊಟ ತಿಂಡಿಯ ಪಟ್ಟಿ ತಯಾರಿಸಿ ಪ್ರಸ್ತಾವನೆ ಸಲ್ಲಿಸಿದ್ದಾರೆ.

ಪ್ರಸ್ತಾವನೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 85 ಮೊದೇಶಾ 2010, ಬೆಂಗಳೂರು, ದಿನಾಂಕ:15.07.2010**

ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು ಮತ್ತು ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜುಗಳ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ 2010-11ನೇ ಸಾಲಿನಿಂದ ಜಾರಿಗೆ ಬರುವಂತೆ ಏಕರೂಪದ ಮೆನುಚಾರ್ಟ್ ನಿಗಧಿಪಡಿಸಿದಂತೆ ಆದೇಶಕ್ಕೆ ಲಗತ್ತುಪಡಿಸಿದ ಅನುಬಂಧಗಳಲ್ಲಿನ ವಿವರಗಳಂತೆ ನಿಗಧಿಪಡಿಸಿದೆ. ಅನುಬಂಧ-1 ರಲ್ಲಿ ಪ್ರತಿ ವಿದ್ಯಾರ್ಥಿಗೆ ಪ್ರತಿನಿತ್ಯ ನೀಡಬೇಕಾದ ಆಹಾರ ಪದಾರ್ಥಗಳ ಪರಿಮಾಣ, ಅನುಬಂಧ-2 ರಲ್ಲಿ ಕರಾವಳಿ ಪ್ರದೇಶ, ಅನುಬಂಧ-3 ರಲ್ಲಿ ಮಲೆನಾಡು ಮತ್ತು ದಕ್ಷಿಣಕರ್ನಾಟಕ ಮತ್ತು ಅನುಬಂಧ-4 ರಲ್ಲಿ ಉತ್ತರಕರ್ನಾಟಕ ಪ್ರದೇಶಗಳಲ್ಲಿರುವ ಆಹಾರ ಪದ್ಧತಿ ಅನುಸರಿಸಿ ನೀಡುವುದು.

ಮೆನು ಚಾರ್ಟ್‌ನಲ್ಲಿ ನಿಗಧಿಪಡಿಸಿದ ಆಹಾರದಲ್ಲಿ ಅಗತ್ಯವಿದ್ದಲ್ಲಿ ಸ್ವಲ್ಪ ಬದಲಾವಣೆ ಮಾಡಿಕೊಂಡು ಪ್ರತಿನಿತ್ಯ ಊಟತಿಂಡಿ ವಿದ್ಯಾರ್ಥಿಗಳಿಗೆ ನೀಡಲು ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ರಮವಹಿಸಲು ಆದೇಶಿಸಿದೆ. ಮೆನು ಚಾರ್ಟ್ ಪ್ರಕಾರ ಊಟತಿಂಡಿ ನೀಡುವುದರಲ್ಲಿ ವ್ಯತ್ಯೆಯಾದಲ್ಲಿ ಇದಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹೊಣೆಗಾರರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
6. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಮುಖಾಂತರ.
7. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.